	3.	ಸರ್ಕಾರಿ ಪ್ರಾಥಮಿಕ ಶಾಲೆ, ಹಸಾಂಡಹಳ್ಳಿ.
	4.	ಸರ್ಕಾರಿ ಪ್ರಾಥಮಿಕ ಶಾಲೆ, ಕೊತ್ತೂರು.
	5.	ಸರ್ಕಾರಿ ಪ್ರಾಥಮಿಕ ಶಾಲೆ, ಕತ್ತರಹಳ್ಳಿ.
	6.	ಸರ್ಕಾರಿ ಪ್ರಾಥಮಿಕ ಶಾಲೆ, ಅಜ್ಜಪ್ಪನಹಳ್ಳಿ.
	7.	ಸರ್ಕಾರಿ ಪ್ರಾಥಮಿಕ ಶಾಲೆ, ಹೊಸಮನೆಗಳು.
	8.	ಸರ್ಕಾರಿ ಪ್ರಾಥಮಿಕ ಶಾಲೆ, ಪಿ.ಡಬ್ಲ್ಯೂ.ಡಿ. ಕಾಲೋನಿ, ಮಾಲೂರು.
	9.	ಸರ್ಕಾರಿ ಪ್ರಾಥಮಿಕ ಶಾಲೆ, ಉಪಾಸಪುರ.
	10.	ಸರ್ಕಾರಿ ಪ್ರಾಥಮಿಕ ಶಾಲೆ, ಎಳೇಸಚಿದ್ರ.
	11.	ಸರ್ಕಾರಿ ಪ್ರಾಥಮಿಕ ಶಾಲೆ, ನೀಲಕಂಠ ಅಗ್ರಹಾರ.
	12.	ಸರ್ಕಾರಿ ಪ್ರಾಥಮಿಕ ಶಾಲೆ, ಮುತ್ತುಗದಹಳ್ಳಿ.
	13.	ಸರ್ಕಾರಿ ಪ್ರಾಥಮಿಕ ಶಾಲೆ, ನಕ್ಕನಹಳ್ಳಿ.
	14.	ಸರ್ಕಾರಿ ಪ್ರಾಥಮಿಕ ಶಾಲೆ, ಮಲಿನೂರು.
	15.	ಸರ್ಕಾರಿ ಪ್ರಾಥಮಿಕ ಶಾಲೆ, ದೇವರಹಳ್ಳಿ.
2004–05	1.	ಸರ್ಕಾರಿ ಪ್ರಾಥಮಿಕ ಶಾಲೆ, ಓಬಳಾಪುರ.
	2.	ಸರ್ಕಾರಿ ಪ್ರಾಥಮಿಕ ಶಾಲೆ, ಸೀತನಾಯಕನಹಳ್ಳಿ.
	3.	ಸರ್ಕಾರಿ ಪ್ರಾಥಮಿಕ ಶಾಲೆ, ಸಿದ್ಧನಹಳ್ಳಿ.
	4.	ಸರ್ಕಾರಿ ಪ್ರಾಥಮಿಕ ಶಾಲೆ, ಪಾಳ್ಯ.
	5.	ಸರ್ಕಾರಿ ಪ್ರಾಥಮಿಕ ಶಾಲೆ, ಕೂರ್ನ ಹೊಸಹಳ್ಳಿ.
	6.	ಸರ್ಕಾರಿ ಪ್ರಾಥಮಿಕ ಶಾಲೆ, ರಾಮೇನಹಳ್ಳಿ.

2506(3036) ಶ್ರೀ ಕೃಷ್ಣಯ್ಯ ಶೆಟ್ಟಿ ಎಸ್.ಎನ್. (ಮಾಲೂರು):–ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆ, ಮಾಲೂರು ತಾಲ್ಲೂಕಿನಲ್ಲಿರುವ ಸರ್ಕಾರಿ ಆಸ್ಪತ್ರೆಗಳು ಎಷ್ಟು;

ಆ) ಈ ಆಸ್ಪತ್ರೆಗೆ ಹಾಸಿಗೆ ಹೊದಿಕೆ ಮತ್ತು ಔಷಧಿಗಳನ್ನು ಸರಿಯಾಗಿ ಸರಬರಾಜು ಮಾಡಲಾಗುತ್ತಿದೆಯೇ;

ಇ) ಇವುಗಳು ಸಾಕಷ್ಟು ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಸಿಗೆ ಹಾಗೂ ಹೊದಿಕೆಗಳನ್ನು ಎಷ್ಟು ವರ್ಷಕ್ಕೊಮ್ಮೆ ಬದಲಾಯಿಸಲಾಗುವುದು;

ಉ) ಈ ಆಸ್ಪತ್ರೆಗಳಲ್ಲಿ ಹಾಸಿಗೆ ಮತ್ತು ಹೊದಿಕೆಗಳನ್ನು ಕೊನೆಯದಾಗಿ ಯಾವಾಗ ಸರಬರಾಜು ಮಾಡಲಾಗಿದೆ? (ವಿವರ ನೀಡುವುದು)?

ಶ್ರೀ ಎನ್. ಚಲುವರಾಯಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಕೋಲಾರ ಜಿಲ್ಲೆ, ಮಾಲೂರು ತಾಲ್ಲೂಕಿನಲ್ಲಿ 5 ಪ್ರಾಥಮಿಕ ಆರೋಗ್ಯ ಕೇಂದ್ರಗಳು, 2 ಪ್ರಾಥಮಿಕ ಆರೋಗ್ಯ ಘಟಕಗಳು, ಒಂದು ಸಾರ್ವಜನಿಕ ಆಸ್ಪತ್ರೆ ಹಾಗೂ ಒಂದು ಆಯುರ್ವೇದಿಕ್ ಆಸ್ಪತ್ರೆ ಕೆಲಸ ನಿರ್ವಹಿಸುತ್ತಿವೆ.

ಆ) ಮಾಡಲಾಗುತ್ತಿದೆ.

ಇ) ಬಂದಿಲ್ಲ.

ಈ) ಹಾಸಿಗೆ ಹೊದಿಕೆಗಳು ನಿರುಪಯುಕ್ತವಾಗದಾಗ ಬೇಡಿಕೆಗಳಿಗನುಗುಣವಾಗಿ ಬದಲಾಯಿಸಲಾಗುತ್ತಿದೆ.

ಉ) 2001–02ನೇ ಸಾಲಿನಲ್ಲಿ ಸರಬರಾಜು ಮಾಡಲಾಯಿತು.

2507(1864) ಶ್ರೀ ಕೃಷ್ಣಮೂರ್ತಿ ಕೆ.ಎಂ. (ಕಡೂರು):–ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳೆಷ್ಟು;

ಆ) ಈ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ಗ್ರಾಮೀಣ ಪ್ರದೇಶದಲ್ಲಿರುವ ಆಸ್ಪತ್ರೆಗಳಲ್ಲಿ ವೈದ್ಯರ ಹುದ್ದೆ ಹೆಚ್ಚು ತೆರವಾಗಿದ್ದು, ಅವುಗಳನ್ನು ತುಂಬಲು ಸರ್ಕಾರದ ಕ್ರಮಗಳೇನು?

ಶ್ರೀ ಎನ್. ಚಲುವರಾಯಸ್ವಾಮಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರ ಸಂಖ್ಯೆ 38.

ಆ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಇ) ಚಿಕ್ಕಮಗಳೂರು ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ 16 ವೈದ್ಯರ ಹುದ್ದೆಗಳು ಖಾಲಿ ಇರುತ್ತದೆ. ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

2508(1865) ಶ್ರೀ ಕೃಷ್ಣಮೂರ್ತಿ ಕೆ.ಎಂ. (ಕಡೂರು):–ಮಾನ್ಯ ಗ್ರಾಮೀಣ ನೀರು ಸರಬರಾಜು, ನೈರ್ಮಲ್ಯ ಮತ್ತು ಗ್ರಾಮೀಣಾಭಿವೃದ್ಧಿ ಇಂಜಿನಿಯರಿಂಗ್ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಕುಡಿಯುವ ನೀರಿನ ಯೋಜನೆಗಳಿಗೆ 2003–04 ಮತ್ತು 2004–05ನೇ ಸಾಲುಗಳಿಗೆ ಬಿಡುಗಡೆಯಾದ ಹಣವೆಷ್ಟು;

ಆ) ರಾಜ್ಯವಲಯ ಅನುದಾನದ ಯೋಜನೇತರ ಬಾಬ್ತಿನಲ್ಲಿ ಈ ಸಾಲಿಗೆ ಜಿಲ್ಲಾ ಪಂಚಾಯತ್‌ಗೆ ಹಣ ನೀಡಲಾಗಿದೆಯೇ;

ಇ) 2003–04ನೇ ಸಾಲಿನಲ್ಲಿ ಈ ಲೆಕ್ಕ ಶೀರ್ಷಿಕೆಯಲ್ಲಿ ರಸ್ತೆ ಕಾಮಗಾರಿಗೆ ಹಣ ಪಾವತಿ ಮಾಡಲು ಕೈಗೊಂಡ ಕ್ರಮವೇನು?